**FEBRUARY 12,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ವಿಶ್ವಮಟ್ಟದ ಮೂಲಸೌಕರ್ಯಗಳು, ಕೌಶಲಭರಿತ** ಸಂಪನ್ಮೂಲ ಹಾಗೂ ಸುಭದ್ರ ನೀತಿಗಳಿಂದ ಕರ್ನಾಟಕವು ಹೂಡಿಕೆಗೆ ಸೂಕ್ತ ತಾಣವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಜಾಗತಿಕ ಹೂಡಿಕೆದಾರರ ಸಮಾವೇಶ 'ಇನ್ವೆಸ್ಟ್ ಕರ್ನಾಟಕ 2025' ನ್ನು ಕೇಂದ್ರ ಸಚಿವ ರಾಜನಾಥ್ ಸಿಂಗ್ ಅವರೊಂದಿಗೆ ಜಂಟಿಯಾಗಿ ಉದ್ಘಾಟಿಸಿ ಅವರು ಮಾತನಾಡಿದರು. ಹೂಡಿಕೆದಾರರಿಗೆ ಸುಭದ್ರವಾದ, ಉದ್ಯಮಸ್ನೇಹಿ ವಾತಾವರಣ ಕಲ್ಪಿಸಲು ಸರ್ಕಾರ ಬದ್ಧವಾಗಿದೆ ಎಂದರು. ನೂತನ ಕೈಗಾರಿಕಾ ನೀತಿಯಡಿ, ಬೆಂಗಳೂರು ನಗರದ ಹೊರವಲಯದಲ್ಲಿ ಹಾಗೂ ಹಿಂದುಳಿದ  ಜಿಲ್ಲೆ, ತಾಲೂಕುಗಳಲ್ಲಿ ಹೂಡಿಕೆಗೆ ಆದ್ಯತೆ ನೀಡುವುದು ನೀತಿಯ ಪ್ರಮುಖ ಅಂಶವಾಗಿದೆ. ಇಂದು ಸಮಾವೇಶದಲ್ಲಿ ವಿವಿಧ ವಿಚಾರಗೋಷ್ಠಿಗಳು, ಸಂವಾದ ಹಾಗೂ ಸಮೂಹ ಚರ್ಚೆಗಳು ನಡೆಯಲಿವೆ.

<><><>

**ಕರ್ನಾಟಕ ಲಲಿತಾ ಅಕಾದೆಮಿಯು 2022–23 ಹಾಗೂ** 2023–24 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಘೋಷಿಸಿದೆ. ಅಕಾದೆಮಿಯ ಗೌರವ ಪ್ರಶಸ್ತಿಗೆ ಭಾಜನರಾದವರಲ್ಲಿ ಓರ್ವರಾದ, ತುಮಕೂರು ಮೂಲದ ನಿರ್ಮಲಾ ಕುಮಾರಿ ಅವರು ದೇಶ ವಿದೇಶಗಳಲ್ಲಿ ಚಿತ್ರಕಲಾ ಪ್ರದರ್ಶನವನ್ನು ನೀಡಿದ್ದಾರೆ. ಸ್ತ್ರೀ ಸಂವೇದಿ ಚಿತ್ರಗಳನ್ನು ಹೆಚ್ಚಾಗಿ ತಮ್ಮ ಕುಂಚದ ಮೂಲಕ ಚಿತ್ರಿಸುತ್ತಿರುವ ಅವರು, ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ.

<><><>

**ಬೈಟ್: ನಿರ್ಮಲಾ ಕುಮಾರಿ  ಸೆಕೆಂದುಗಳು 37 ಸೆಕೆಂದುಗಳು**

<><><>

**ವಿಜಯನಗರ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ನೋಂದಣಿಯನ್ನು** ಇ–ಆಸ್ತಿ ತಂತ್ರಾಂಶದಿಂದ ನೋಂದಾಯಿಸಲು, ಇ–ಆಸ್ತಿ ತಂತ್ರಾಂಶವನ್ನು ಕಾವೇರಿ–2 ತಂತ್ರಾಂಶದೊಂದಿಗೆ ಸಂಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ. ಇ–ಖಾತಾ ಸಂಯೋಜನೆಯಿಂದ ಸಾರ್ವಜನಿಕರಿಗೆ ಪ್ರಯೋಜನವಾಗಲಿದ್ದು, ಪ್ರಮುಖವಾಗಿ, ಇ–ತಂತ್ರಾಂಶದಿಂದಾಗಿ ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯುವುದು, ಇ–ಖಾತಾದಿಂದ ಮಾತ್ರ ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯವಾಗಲಿದೆ ಎಂದರು. ಸಾರ್ವಜನಿಕರು ಇ–ಆಸ್ತಿ ಸಂಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುವಂತೆ ಅವರು ತಿಳಿಸಿದ್ದಾರೆ.

<><><>

**ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಾಫಿಗೆ ಹೆಚ್ಚಿನ ಬೇಡಿಕೆ ಇದ್ದು,** ರಫ್ತು ಕಡಿಮೆ ಇರುವ ಕಾರಣದಿಂದ ಪ್ರಸ್ತುತ ಕಾಫಿಗೆ ಬೆಲೆ ಏರಿಕೆಯಾಗಿದ್ದು ಹೆಚ್ಚಿನ ಧಾರಣೆ ನಿಗದಿಯಾಗಿದೆ ಎಂದು ಭಾರತೀಯ ಕಾಫಿ ಮಂಡಳಿ ಅಧ್ಯಕ್ಷ ದೇವೃಂದ ದಿನೇಶ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು; ಹವಾಮಾನ ಬದಲಾವಣೆಗಳಿಂದ ಬೆಲೆ ಏರುಪೇರಾಗುತ್ತದೆ. ಪ್ರಸ್ತುತ ಕಾಫಿ ಬೆಳೆಯುವ ವಿದೇಶಗಳಾದ ಬ್ರಿಜಿಲ್ ಮತ್ತು ವಿಯೆಟ್ನಾಂ ದೇಶಗಳಲ್ಲಿ ಮಳೆ ಕಡಿಮೆಯಾಗಿದ್ದು ಇಳುವರಿ ಕುಸಿದಿದೆ, ಇದರಿಂದ ಭಾರತದ ಕಾಫಿಗೆ ಹೆಚ್ಚಿನ ಬೇಡಿಕೆಯಿದ್ದು ಕಳೆದ ವರ್ಷಕಿಂದ ಶೇಕಡಾ 80 ರಷ್ಟು ಬೆಲೆ ಹೆಚ್ಚಳವಾಗಿದೆ ಎಂದರು.

<><><>

**ಅಂತರ್ಜಾಲ ನಮ್ಮ ಜೀವನದ ಒಂದು ಅವಿಭಾಜ್ಯ ಅಂಗವಾಗಿದ್ದು, ಅದನ್ನು** ಬಳಕೆ ಮಾಡುವಲ್ಲಿ ಸುರಕ್ಷಿತ ಹಾಗೂ ಜಾಗೃತಿ ವಹಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದ್ದಾರೆ. ಬಾಗಲಕೋಟೆಯಲ್ಲಿ ಆಯೋಜಿಸಲಾಗಿದ್ದ ಸುರಕ್ಷಿತ ಅಂತರ್ಜಾಲ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಸೈಬರ್ ಅಪರಾಧಗಳ ಬಗ್ಗೆ ಜನರು ಜಾಗೃತರಾಗಿರಬೇಕಿದೆ. ಇಂಟರನೆಟ್ ಮತ್ತು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯ ಬದಲು ಮಿತವಾಗಿ ಬಳಸಬೇಕು ಎಂದರು.

<><><>

**ಗದಗ ಜಿಲ್ಲಾಡಳಿತ ಸಭಾ ಭವನದಲ್ಲಿ** ಜರುಗಿದ ಅಂತರ್ಜಾಲ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಗದಗ ಜಿಲ್ಲಾ ಸೈಬರ್ ಕ್ರೈಂ  ಇನ್ಸಪೇಕ್ಟರ್ ಸಿದ್ದಾರೋಡ ಗಡಾದ, ಅಪರಿಚಿತರೊಂದಿಗೆ ಬ್ಯಾಂಕ್ ಖಾತೆ ಮಾಹಿತಿಗಳಾದ ಕಾರ್ಡ ನಂಬರ್, ಮುಕ್ತಾಯದ ಅವಧಿ, ಓಟಿಪಿ, ಯುಪಿಐ ಪಿನ್ ಮತ್ತು ಎಂ.ಪಿನ್ ಮಾಹಿತಿಗಳನ್ನು ಹಂಚಿಕೊಳ್ಳಬಾರದು ಎಂದು ಸಲಹೆ ನೀಡಿದರು.

<><><>

**ಗದಗ ನಗರದಲ್ಲಿ ಬೃಹತ ಉದ್ಯೋಗ ಮೇಳವು** ಮಾರ್ಚ 1 ಹಾಗೂ 2 ರಂದು ನಡೆಯಲಿದೆ ಎಂದು ರಾಜ್ಯ ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ ಪಾಟೀಲ ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಉದ್ಯೋಗ ಮೇಳದಲ್ಲಿ 50 ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಪಾಲ್ಗೊಳ್ಳಲಿವೆ, ಎಸ್ ಎಸ್ ಎಲ್ ಸಿ, ಪಿಯುಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿ ಪಡೆದ ನಿರುದ್ಯೋಗಿ ಯುವಕ, ಯುವತಿಯರು ಉದ್ಯೋಗ ಮೇಳದ ಪ್ರಯೋಜನ ಪಡೆಯಬಹುದಾಗಿದೆ ಎಂದರು.

<><><>

**ರಾಜ್ಯದ ಉಪ ಲೋಕಾಯುಕ್ತ ಬಿ.ವೀರಪ್ಪ** ಅವರು ಇಂದಿನಿದ ಮೂರು ದಿನಗಳ ಕಾಲ ಹಾವೇರಿ ಜಿಲ್ಲೆಯ ಪ್ರವಾಸ ಕೈಗೊಂಡಿದ್ದಾರೆ. ಹಾವೇರಿಯ ತರಕಾರಿ ಮಾರುಕಟ್ಟೆ, ಬಸ್ ನಿಲ್ದಾಣಕ್ಕೆ ಭೇಟಿ ನೀಡಿದ ಅವರು, ಪರಿಶೀಲನೆ ನಡೆಸಿ ಸಾರ್ವಜನಿಕರಿಂದ ಅಹವಾಲುಗಳನ್ನು ಆಲಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**